ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡ
KARNATAK UNIVERSITY DHARWAD
ಪರೀಕ್ಷಾ ವಿಭಾಗ
ಗೌಪ್ಯ ಶಾಖೆ, 2ನೇ ಮಹಡಿ, ಪರೀಕ್ಷಾ ಭವನ
EXAMINATION SECTION
Confidential Branch, 2nd Floor, Examination Bhavan

Azadi Ka Amrit Mahotsav
Website: www.kud.ac.in
e-mail: confidential@kud.ac.in
☎: (0836) 2215259

ನಂ.ಕವಿವಿ/ಪರೀಕ್ಷಾ-ಗೌಪ್ಯ/2024/೭೬೪ ದಿನಾಂಕ :02.03.2024

## ಸುತ್ತೋಲೆ

ವಿಷಯ: ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯಗಳಲ್ಲಿನ ಸ್ನಾತಕ (NEP) 1, 3 ಮತ್ತು 5ನೇ ಸೆಮೆಸ್ಟರ್ ಪದವಿ ಪ್ರಾಯೋಗಿಕ ಪರೀಕ್ಷೆಗಳನ್ನು ಜರುಗಿಸುವ ಕುರಿತು.

ಉಲ್ಲೇಖ: 1) ನಂ.ಕವಿವಿ/ಪರೀಕ್ಷಾ-ಗೌಪ್ಯ/2024/220 ದಿನಾಂಕ:06.01.2024.
2) ನಂ.ಕವಿವಿ/ಪರೀಕ್ಷಾ-ಗೌಪ್ಯ/2024/229 ದಿನಾಂಕ:20.01.2024.

** **

ಮೇಲ್ಕಾಣಿಸಿದ ವಿಷಯ ಸಂಬಂಧಿಸಿದಂತೆ, ಉಲ್ಲೇಖ 1 ಮತ್ತು 2ರಲ್ಲಿ ಕಾಣಿಸಿದಂತೆ ಸರ್ಕಾರಿ ಮಹಾವಿದ್ಯಾಲಯಗಳಲ್ಲಿನ ಎಲ್ಲ ಸ್ನಾತಕ ಪದವಿಗಳ ಪ್ರಾಯೋಗಿಕ ಪರೀಕ್ಷೆಗಳನ್ನು ಲಿಖಿತ ಪರೀಕ್ಷೆ ಮುಗಿದ ನಂತರ ಜರುಗಿಸಲು ತಿಳಿಸಲಾಗಿತ್ತು. ಆದ್ದರಿಂದ, ಬಿಸಿಎ ಪದವಿಗಳ ಲಿಖಿತ ಪರೀಕ್ಷೆಗಳು ಈಗಾಗಲೇ ಮುಗಿದಿದ್ದು, ಬಿ.ಎಸ್ಸಿ. ಪದವಿ ತರಗತಿಗಳ 1, 3 ಮತ್ತು 5 ನೇ ಸೆಮೆಸ್ಟರ್ ಲಿಖಿತ ಪರೀಕ್ಷೆಗಳು ಕ್ರಮವಾಗಿ ದಿನಾಂಕ: 07, 09 ಹಾಗೂ 11ನೇ ಮಾರ್ಚ 2024ರಲ್ಲಿ ಮುಗಿಯುತ್ತಿರುವುದರಿಂದ ಪ್ರಾಯೋಗಿಕ ಪರೀಕ್ಷೆಗಳನ್ನು ಕೂಡಲೇ ಜರುಗಿಸಲು ಸಂಬಂಧಪಟ್ಟ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳಿಗೆ ಈ ಮೂಲಕ ತಿಳಿಸಲಾಗಿದೆ.

ಆದ್ದರಿಂದ, NEP ಅಡಿಯಲ್ಲಿ ಪ್ರವೇಶ ಪಡೆದುಕೊಂಡ ರೆಗ್ಯೂಲರ್/ರಿಪಿಟರ್ಸ್ ವಿದ್ಯಾರ್ಥಿಗಳಿಗೆ ಈ ಮೇಲಿನಂತೆ ಲಿಖಿತ ಪರೀಕ್ಷೆಗಳು ಮುಗಿದ ನಂತರ ಪ್ರಾಯೋಗಿಕ ಪರೀಕ್ಷೆಗಳನ್ನು ಕೂಡಲೇ ಪ್ರಾರಂಭಿಸಿ ದಿನಾಂಕ: 16-03-2024ರ ಒಳಗಾಗಿ ಜರುಗಿಸಿ ಮುಕ್ತಾಯಗೊಳಿಸಲು ಈ ಮೂಲಕ ತಿಳಿಸಲಾಗಿದೆ. ಅದರಂತೆ, ಬಿ.ಎ. ಪದವಿ ತರಗತಿಗಳಲ್ಲಿರುವ ಪ್ರಾಯೋಗಿಕ ಪರೀಕ್ಷೆಗಳನ್ನು ಕೂಡ ದಿನಾಂಕ: 22-03-2024ರ ಒಳಗಾಗಿ ಮುಕ್ತಾಯಗೊಳಿಸಲು ಕ್ರಮವಹಿಸುವುದು.

ಸದರಿ NEP ಅಡಿಯಲ್ಲಿ ಪ್ರವೇಶ ಪಡೆದುಕೊಂಡ ಎಲ್ಲ ಸೆಮೆಸ್ಟರ್‌ಗಳ ವಿದ್ಯಾರ್ಥಿಗಳಿಗೆ UUCMS ನ ಹೊರಗಡೆಗೆ ಬ್ಯಾಚ್ ರಚಿಸಿ ತಮಗೆ ಹತ್ತಿರದ ಕಾಲೇಜಿನ ಉಪನ್ಯಾಸಕರನ್ನು ಬಾಹ್ಯ ಪರೀಕ್ಷರೆಂದು ನೇಮಿಸಿ ಈ ಮೇಲೆ ತಿಳಿಸಿದ ದಿನಾಂಕದೊಳಗಾಗಿ ಪ್ರಾಯೋಗಿಕ ಪರೀಕ್ಷೆಗಳನ್ನು ಜರುಗಿಸುವುದು.

ಮುಂದುವರೆದು, ಪ್ರಾಯೋಗಿಕ ಪರೀಕ್ಷೆಯ ಅಂಕಗಳ ಪಟ್ಟಿಯನ್ನು ವಿಷಯವಾರು ದ್ವಿ-ಪ್ರತಿಯಲ್ಲಿ ತಯಾರಿಸಿ ಆಂತರಿಕ ಪರೀಕ್ಷಕರ ಸಹಿಯೊಂದಿಗೆ ಒಂದು ಪ್ರತಿಯನ್ನು ಗಣಕಯಂತ್ರ ಮುಖ್ಯಸ್ಥರಿಗೆ ಹಾಗೂ ಇನ್ನೊಂದು ಪ್ರತಿಯನ್ನು ಸಂಬಂಧಿಸಿದ ಪರೀಕ್ಷಾ ವಿಭಾಗದ ಅಧೀಕ್ಷರಿಗೆ ಪ್ರಾಯೋಗಿಕ ಪರೀಕ್ಷೆಗಳು ಮುಗಿದ ಮೂರು ದಿನಗಳೊಳಗಾಗಿ ಕಳುಹಿಸಲು ಸೂಚಿಸಲಾಗಿದೆ.

**ವಿಶೇಷ ಸೂಚನೆ:**

1) ಈಗಾಗಲೇ UUCMS ನಲ್ಲಿ ಬ್ಯಾಚ್‌ಗಳನ್ನು ರಚಿಸಿದ್ದಲ್ಲಿ ಹಾಗೂ ಬಾಹ್ಯ ಪರೀಕ್ಷಕರನ್ನು ನೇಮಕ ಮಾಡಿದ್ದನ್ನು ಪರಿಗಣಿಸಬಾರದೆಂದು ಈ ಮೂಲಕ ತಿಳಿಸಲಾಗಿದೆ.
2) ಪ್ರಾಯೋಗಿಕ ಪರೀಕ್ಷೆಯ ಅಂಕಗಳನ್ನು ಮುಂದಿನ ದಿನಗಳಲ್ಲಿ UUCMS ನಲ್ಲಿ ದಾಖಲಿಸಲು ತಿಳಿಸಲಾಗುವುದು. ಆದ್ದರಿಂದ ಅಂಕಗಳ ಒಂದು ಪಟ್ಟಿಯನ್ನು ಮಹಾವಿದ್ಯಾಲಯದಲ್ಲಿ ಕಾಯ್ದಿರಿಸಲು ಕೋರಲಾಗಿದೆ.
3) ಆಂತರಿಕ ಪರೀಕ್ಷರನ್ನು ಸಂಬಂಧಪಟ್ಟ ಮಹಾವಿದ್ಯಾಲಯದ ಶಿಕ್ಷಕರು ನಿರ್ವಹಿಸುವುದು. ಯಾವುದೇ ಕಾರಣಕ್ಕೂ ಬಾಹ್ಯ ಪರೀಕ್ಷಕರಿಲ್ಲದೇ ಪ್ರಾಯೋಗಿಕ ಪರೀಕ್ಷೆಗಳನ್ನು ಜರುಗಿಸತಕ್ಕದ್ದಲ್ಲ. ಒಂದು ವೇಳೆ ಆಂತರಿಕ ಪರೀಕ್ಷಕರು ಲಭ್ಯವಿಲ್ಲದಿದ್ದಲ್ಲಿ ಬೇರೆ ಮಹಾವಿದ್ಯಾಲಯದ ಇಬ್ಬರು ಬಾಹ್ಯ ಪರೀಕ್ಷರನ್ನು ನೇಮಿಸಿಕೊಂಡು ಪ್ರಾಯೋಗಿಕ ಪರೀಕ್ಷೆಗಳನ್ನು ಜರುಗಿಸುವುದು.
4) **ಈಗಾಗಲೇ ಸರ್ಕಾರಿ ಮಹಾವಿದ್ಯಾಲಯಗಳು ಪ್ರಾಯೋಗಿಕ ಪರೀಕ್ಷೆಗಳನ್ನು ಜರುಗಿಸಿದ್ದರೆ ಈ ಸುತ್ತೋಲೆ ಅನ್ವಯಿಸುವುದಿಲ್ಲ.**

ಮೇಲ್ಕಾಣಿಸಿದ ಎಲ್ಲ ಅಂಶಗಳನ್ನು ಸಂಬಂಧಿಸಿದ ಎಲ್ಲ ಶಿಕ್ಷಕರ ಹಾಗೂ ವಿದ್ಯಾರ್ಥಿಗಳ ಗಮನಕ್ಕೆ ತಂದು ಅದರಂತೆ ಪ್ರಾಯೋಗಿಕ ಪರೀಕ್ಷೆಗಳನ್ನು ಜರುಗಿಸುವುದು. ತಪ್ಪಿದಲ್ಲಿ ಸಂಬಂಧಿಸಿದ ಪ್ರಾಚಾರ್ಯರೇ ಹೊಣೆಗಾರರು.

2/3

ಕುಲಸಚಿವರು(ಮೌಲ್ಯಮಾಪನ)

ಗೆ,
ಕರ್ನಾಟಕ ವಿಶ್ವವಿದ್ಯಾಲಯ ವ್ಯಾಪ್ತಿಯ ಎಲ್ಲ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳು.

ಪ್ರತಿ ಮಾಹಿತಿಗಾಗಿ :

1. ಸಿಸ್ಟಮ್ ಅನಾಲಿಸ್ಟ್, ಪರೀಕ್ಷಾ ವಿಭಾಗ, ಕ.ವಿ.ವಿ. ಧಾರವಾಡ.
2. ಉಪಕುಲಸಚಿವರು, ವಿದ್ಯಾಮಂಡಳ/ಪರೀಕ್ಷಾ ವಿಭಾಗ, ಕ.ವಿ.ವಿ., ಧಾರವಾಡ.
3. ಸಹಾಯಕ ಕುಲಸಚಿವರು, ವಿದ್ಯಾಮಂಡಳ/ಪರೀಕ್ಷಾ ವಿಭಾಗ, ಕ.ವಿ.ವಿ., ಧಾರವಾಡ.
4. ನಿರ್ದೇಶಕರು, ಐ.ಟಿ. ಶಾಖೆ, ಪರೀಕ್ಷಾ ವಿಭಾಗ, ಕ.ವಿ.ವಿ. ಧಾರವಾಡ. ಸದರ ಸುತ್ತೋಲೆಯನ್ನು ಕವಿವಿ ಅಂತರ್ಜಾಲದಲ್ಲಿ ಪ್ರಕಟಿಸುವುದು.
5. ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ಕ.ವಿ.ವಿ. ಧಾರವಾಡ.
6. ಕುಲಸಚಿವರ ಆಪ್ತ ಕಾರ್ಯದರ್ಶಿಗಳು, ಕ.ವಿ.ವಿ. ಧಾರವಾಡ.
7. ಕುಲಸಚಿವರು (ಮೌಲ್ಯಮಾಪನ) ಆಪ್ತ ಕಾರ್ಯದರ್ಶಿಗಳು, ಕ.ವಿ.ವಿ. ಧಾರವಾಡ.
8. ಅಧೀಕ್ಷಕರು, ಪ್ರಶ್ನೆ ಪತ್ರಿಕೆ / ಗೌಪ್ಯ / ಜಿ.ಎ.ಡಿ. / ವಿದ್ಯಾಂಡಳ (ಪಿ.ಜಿ.ಪಿಎಚ್.ಡಿ) ವಿಭಾಗ, ಸಂಬಂಧಿಸಿದ ಕೋರ್ಸುಗಳ ವಿಭಾಗಗಳು ಪರೀಕ್ಷಾ ವಿಭಾಗ, ಕ.ವಿ.ವಿ. ಧಾರವಾಡ.